ವಿಷಯ: ಮೈಸೂರು ಮಹಾನಗರಪಾಲಿಕೆಯಲ್ಲಿ ಸಿಬ್ಬಂದಿ ಕೊರತೆ.

1086 (1612)

ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಮಹಾನಗರ ಪಾಲಿಕೆಯಲ್ಲಿ ಕಳೆದ ಹತ್ತು ವರ್ಷಗಳ ಹಿಂದೆ ವಿವಿಧ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಸಿಬ್ಬಂದಿಗಳ ಸಂಖ್ಯೆ ಎಷ್ಟು?

ಆ) ಈಗ ಇಲ್ಲಿ ವಿವಿಧ ವಿಭಾಗಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು?

ಇ) ಇಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ನೈರ್ಮಲ್ಯ ಹಾಗೂ ಅಭಿವೃದ್ಧಿ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ ಎಂಬುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಈ) ಇಲ್ಲಿರುವ ಸಿಬ್ಬಂದಿ ಕೊರತೆಯನ್ನು ನೀಗಿಸುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಮೀರಾಜುದ್ದೀನ್ ಪಟೇಲ್ (ಪೌರಾಡಳಿತ ರಾಜ್ಯ ಸಚಿವರು):

ಅ)

ಆಯುಕ್ತರ ಕಛೇರಿ	85
ಮರಾಮತ್ ಶಾಖೆ	339
ಆರೋಗ್ಯ ಶಾಖೆ	190
ಪೌರಕಾರ್ಮಿಕರು	891
ಸೂಯೇಜ್‌ಫಾರಂ	145
ಕಂದಾಯ ಶಾಖೆ	145
ನಗರ ಕುಟುಂಬ ಕಲ್ಯಾಣ ಕಾರ್ಯಾಲಯ	30
ಪುರಭವನ	2
ಒಟ್ಟು:	1827

ಆ) ಆಯುಕ್ತರ ಕಛೇರಿ	94
ಮರಾಮತ್ ಶಾಖೆ	314
ಆರೋಗ್ಯ ಶಾಖೆ	169
ಪೌರಕಾರ್ಮಿಕರು	900
ಸೂಯೇಜ್‌ಘಾರಂ	133
ಕಂದಾಯ ಶಾಖೆ	142
ನಗರ ಕುಟುಂಬ ಕಲ್ಯಾಣ ಕಾರ್ಯಾಲಯ	28
ಪುರಭವನ	2
ಒಟ್ಟು:	1782

ಇ) ಬಂದಿದೆ.

ಈ) ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರ ನೇತೃತ್ವದಲ್ಲಿ ಹುದ್ದೆಗಳ ಸೃಜನದ ಬಗ್ಗೆ ಸಮಿತಿಯನ್ನು ರಚಿಸಲಾಗಿತ್ತು. ಈ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಈ ವರದಿಯಲ್ಲಿ ಪ್ರತಿ 10 ವಾರ್ಡ್‌ಗಳನ್ನು ಒಳಗೊಂಡಂತೆ ಒಂದು ವಲಯವನ್ನು ರಚಿಸಿ ಇದಕ್ಕೆ ಅಗತ್ಯವಿರುವ ಸಿಬ್ಬಂದಿಯನ್ನು ಸೂಚಿಸಿರುವರು. ಆದ್ದರಿಂದ, ಈಗ ಮಹಾನಗರ ಪಾಲಿಕೆಯಲ್ಲಿ ವಲಯ ಪ್ರಕಾರ ಎಷ್ಟು ಹುದ್ದೆಗಳು ಇರುವವೋ ಹಾಗೂ ಎಷ್ಟು ಹುದ್ದೆಗಳ ಅಗತ್ಯತೆ ಇದೆ ಎಂಬ ಬಗ್ಗೆ ಮಾಹಿತಿಯನ್ನು ಒದಗಿಸುವಂತೆ ಕೋರಲಾಗಿದೆ. ಈ ಮಾಹಿತಿ ಬಂದನಂತರ ಈ ಮಹಾನಗರ ಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಅಗತ್ಯತೆಗೆ ಅನುಸಾರವಾಗಿ ಹುದ್ದೆಗಳನ್ನು ಸೃಜಿಸುವ ಬಗ್ಗೆ ಪರಿಶೀಲಿಸಿ ಕ್ರಮ ವಹಿಸಲಾಗುವುದು.

ವಿಷಯ: ಮೈಸೂರು ನಗರದಲ್ಲಿ ವಾಣಿಜ್ಯ ಸಂಕೀರ್ಣದ ಕಾಮಗಾರಿ ಪ್ರಗತಿ.

1087 (1611)

ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದಲ್ಲಿನ ಬೆಂಗಳೂರು ನೀಲಗಿರಿ ರಸ್ತೆಯಲ್ಲಿರುವ ರಣಜಿತ್